# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು - 572 103 ☎:0816 - 2255650,2273511 ಫ್ಯಾಕ್ಸ್ :0816--2270719

ಸಂಖ್ಯೆ:ತು.ವಿ.ಪ.ವಿ.:2023-24: 154 ದಿನಾಂಕ:05.06.2023

"ಅತೀ ತುರ್ತು"

## : ಸುತ್ತೋಲೆ :

**ವಿಷಯ : ತಡೆಹಿಡಿದಿರುವ ವಿದ್ಯಾರ್ಥಿಗಳ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸಿಕೊಂಡು ಫಲಿತಾಂಶ ಬಿಡುಗಡೆಗೆ ಅಗತ್ಯ ಕ್ರಮವಹಿಸುವ ಬಗ್ಗೆ.**

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022 ರ ಸೆಪ್ಟೆಂಬರ್/ಅಕ್ಟೋಬರ್ ಮಾಹೆಯಲ್ಲಿ ನಡೆದ ವಿವಿಧ ಸ್ನಾತಕೋತ್ತರ ಪದವಿಗಳ ದ್ವಿತೀಯ & ನಾಲ್ಕನೇ ಸೆಮಿಸ್ಟರ್‌ನ ಪರೀಕ್ಷೆಗಳ ಫಲಿತಾಂಶಗಳನ್ನು ಈಗಾಗಲೇ ಬಿಡುಗಡೆಗೊಳಿಸಿ ತಾತ್ಕಾಲಿಕ ರ್‍ಯಾಂಕ್ ಪಟ್ಟಿಯನ್ನೂ ಸಹ ಪ್ರಕಟಿಸಲಾಗಿರುತ್ತದೆ. ಆದಾಗ್ಯೂ ಕೆಲವು ವಿಭಾಗಗಳ ವಿದ್ಯಾರ್ಥಿಗಳು ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ಪಾವತಿಸದಿರುವುದರಿಂದ ಸಂಬಂಧಪಟ್ಟ ವಿದ್ಯಾರ್ಥಿಗಳ ಫಲಿತಾಂಶವನ್ನು ಇದುವರೆವಿಗೂ ಪ್ರಕಟಿಸಿರುವುದಿಲ್ಲ.

2023 ರ ಜುಲೈ/ಆಗಸ್ಟ್ ಮಾಹೆಯಲ್ಲಿ ವಿಶ್ವವಿದ್ಯಾನಿಲಯದ ಹದಿನಾರನೇ ವಾರ್ಷಿಕ ಘಟಿಕೋತ್ಸವವು ನಡೆಯಲಿದ್ದು ಈ ಸಂಬಂಧ ಈಗಾಗಲೇ ಪ್ರಕಟಿಸಿರುವ ತಾತ್ಕಾಲಿಕ ರ್‍ಯಾಂಕ್ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ:08.06.2023 ಆಗಿರುತ್ತದೆ.

ತತ್ಸಂಬಂಧ, ತಡೆಹಿಡಿಯಲಾಗಿರುವ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶವನ್ನು ಬಿಡುಗಡೆಗೊಳಿಸದೇ ಅಂತಿಮ ರ್‍ಯಾಂಕ್ ಪಟ್ಟಿಯನ್ನು ಪ್ರಕಟಗೊಳಿಸಲು ಸಾಧ್ಯವಿರುವುದಿಲ್ಲ. **ಈ ಸಂಬಂಧ ತುರ್ತಾಗಿ ತಡೆಹಿಡಿದಿರುವ ಎಲ್ಲಾ ವಿದ್ಯಾರ್ಥಿಗಳ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕವನ್ನು ದಿನಾಂಕ:09.06.2023 ರೊಳಗೆ ವಿಶ್ವವಿದ್ಯಾನಿಲಯಕ್ಕೆ ಪಾವತಿಸಲು ಅಂತಿಮ ಅವಕಾಶ ನೀಡಲಾಗಿದ್ದು, ಸದರಿ ಕೊನೆಯ ದಿನಾಂಕದೊಳಗೆ ಶುಲ್ಕ ಪಾವತಿಸಿಕೊಂಡು ಫಲಿತಾಂಶ ಬಿಡುಗಡೆಗೆ ಅಗತ್ಯ ಕ್ರಮವಹಿಸುವಂತೆ, ತಪ್ಪಿದಲ್ಲಿ ಅಂತಿಮ ರ್‍ಯಾಂಕ್ ಪಟ್ಟಿಯಲ್ಲಿ ವಿದ್ಯಾರ್ಥಿಗಳ ಹೆಸರು ಪ್ರಕಟವಾಗದಿದ್ದರೇ ಸಂಬಂಧಪಟ್ಟ ವಿದ್ಯಾರ್ಥಿಗಳೇ ಮುಂದಿನ ಎಲ್ಲಾ ಆಗುಹೋಗುಗಳಿಗೆ ನೇರ ಹೊಣೆಗಾರರಾಗಿರುತ್ತಾರೆ ಎಂಬುದನ್ನು ಮತ್ತು ಒಂದು ಬಾರಿ ಅಂತಿಮ ರ್‍ಯಾಂಕ್ ಪಟ್ಟಿ ಪ್ರಕಟಿಸಿದ ನಂತರ ಯಾವುದೇ ಕಾರಣಕ್ಕೂ ಬದಲಾಯಿಸುವುದಿಲ್ಲ ಎಂಬುದನ್ನೂ ಸಹ ಸಂಬಂಧಪಟ್ಟ ವಿದ್ಯಾರ್ಥಿಗಳ ಆದ್ಯ ಗಮನಕ್ಕೆ ತರುವಂತೆ ಈ ಮೂಲಕ ತಮಗೆ ಸೂಚಿಸಲಾಗಿದೆ.**

5/6/23

ಕುಲಸಚಿವರು(ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

ಮುಖ್ಯಸ್ಥರು/ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು,
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು :**

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. - **ಇಂದೇ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.**
5. ಕಚೇರಿ ಪ್ರತಿ